# ಮುಖ್ಯಮಂತ್ರಿ ಆದೇಶ: ನೆರೆ ಸ್ಥಳಗಳಿಗೆ ಸಚಿವರ ದೌಡು

- ಸಿಎಂ ಸೂಚನೆ ಪಾಲಿಸಿದ ಡಿಸಿಎಂ ಕಾರಜೋಳ, ಸಿ.ಟಿ.ರವಿ
- ವಿಡಿಯೋ ಕಾನ್ಫರೆನ್ಸ್ ಮೂಲಕ ಪರಿಶೀಲನೆ ನಡೆಸಿದ ಸಿ.ಸಿ.ಪಾಟೀಲ್
- ಇಂದು ಬೀದರ್‌ಗೆ ಸಚಿವ ಪ್ರಭು ಚೌವ್ಹಾಣ್ ಭೇಟಿ

ಬೆಂಗಳೂರು: ಪ್ರವಾಹ ಪೀಡಿತ ಜಿಲ್ಲೆಗಳ ಉಸ್ತುವಾರಿ ಸಚಿವರುಗಳು ತಕ್ಷಣವೇ ಸ್ಥಳಕ್ಕೆ ಹೊರಡಬೇಕು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಸೂಚನೆ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಸಿ.ಟಿ.ರವಿ ಸಹಿತ ಕೆಲವು ಸಚಿವರು ಶುಕ್ರವಾರವೇ ಹಾಜರಾಗಿದ್ದಾರೆ.

ಪ್ರಭು ಚೌವ್ಹಾಣ್ ಶುಕ್ರವಾರ ಬೆಂಗಳೂರಿನಿಂದ ಹೊರಟಿದ್ದು ಶನಿವಾರ ಜಿಲ್ಲಾಕೇಂದ್ರ ತಲುಪಲಿದ್ದಾರೆ. ಸಿ.ಸಿ.ಪಾಟೀಲ್ ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರವಾಹ ಪರಿಹಾರ ಕಾರ್ಯಗಳ ಪ್ರಗತಿ ಪರಿಶೀಲನೆ ನಡೆಸಿದ್ದಾರೆ.

ಸಂಪುಟ ಸಭೆಗೆ ಬರುವ ಮುನ್ನ ಅ.20 ಹಾಗೂ 21 ರಂದು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಅಧಿಕಾರಿಗಳ ಜತೆ ಸಭೆ ನಡೆಸಿದ್ದವರು, ಭಾನುವಾರ ಮತ್ತು ಸೋಮವಾರ ಭೇಟಿ ನಿಗದಿಪಡಿಸಿಕೊಂಡಿದ್ದಾರೆ.

ಬಳ್ಳಾರಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ಯಾದಗಿರಿ, ಕೊಪ್ಪಳ, ರಾಯಚೂರು, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಅತಿ ಹೆಚ್ಚು ಮಳೆಯಾಗಿ ಪ್ರವಾಹ ಪರಿಸ್ಥಿತಿ ಉಂಟಾಗಿತ್ತು. ಸಂಪುಟ ಸಭೆಯಲ್ಲಿ ಮುಖ್ಯಮಂತ್ರಿಯವರು ತಕ್ಷಣ ಜಿಲ್ಲಾಕೇಂದ್ರಗಳಿಗೆ ಭೇಟಿ ನೀಡಿ ಅಧಿಕಾರಿಗಳ ಜತೆ ಸಭೆ ನಡೆಸಿ ಪರಿಹಾರ ಕಾರ್ಯಗಳ ಬಗ್ಗೆ ಗಮನ ನೀಡಿ. ಪ್ರವಾಹ ಪೀಡಿತ ಪ್ರದೇಶಗಳ ಕಾಳಜಿ ಕೇಂದ್ರಗಳಲ್ಲಿನ ವ್ಯವಸ್ಥೆ ಬಗ್ಗೆ ಖುದ್ದು ಭೇಟಿ ನೀಡಿ ಪರಿಶೀಲಿಸಿ ಎಂದು ಸೂಚನೆ ನೀಡಿದ್ದರು.

ಡಿಸಿಎಂ ಗೋವಿಂದ ಕಾರಜೋಳ ಸಂಪುಟ ಸಭೆ ಮುಗಿಸಿ ನೇರವಾಗಿ ಬಾಗಲಕೋಟೆ ಜಿಲ್ಲೆಗೆ ಆಗಮಿಸಿ ಶುಕ್ರವಾರ ಅಧಿಕಾರಿಗಳು, ಜನಪ್ರತಿನಿಧಿಗಳ ಸಭೆ ನಡೆಸಿ ಪರಿಹಾರ ಕಾರ್ಯಗಳ ಬಗ್ಗೆ ಮಾಹಿತಿ ಪಡೆದರು. ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವ ಸಿ.ಟಿ.ರವಿ ಸಂಪುಟ ಸಭೆ ಮುಗಿಸಿ ಗುರುವಾರ ಚಿಕ್ಕಮಗಳೂರಿಗೆ ಬಂದು ಶುಕ್ರವಾರ ಮಧ್ಯಾಹ್ನದವರೆಗೆ ಅಧಿಕಾರಿಗಳ ಜತೆ ಸಭೆ ನಡೆಸಿ ಮತ್ತೆ ಬೆಂಗಳೂರಿಗೆ ತೆರಳಿದರು. ಬಳ್ಳಾರಿ, ರಾಯಚೂರು, ಕೊಪ್ಪಳ, ವಿಜಯಪುರ, ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರು ತಮ್ಮ ತಮ್ಮ ಜಿಲ್ಲೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.